# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1192 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 17.12.2025(ಕಂದಾಯ ಇಲಾಖೆಯಿಂದ ವರ್ಗಾವಣೆ). |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕಂದಾಯ/ಕೃಷಿ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಂಡಿರುವವರಿಗೆ ಮೂಲಭೂತ ಸೌಕರ್ಯ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕಂದಾಯ/ಕೃಷಿ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಂಡವರಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರನ್ವಯ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ತೆರಿಗೆಗೆ ಒಳಪಡುವ ಆಸ್ತಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ನಿಯಮಗಳಲ್ಲಿ ಅವಕಾಶವಿರುತ್ತದೆ. |
| (ಆ) | ಕಂದಾಯ ಭೂಮಿಯಲ್ಲಿರುವ ನಿವೇಶನ ಅಥವಾ ಮನೆಗಳಿಗೆ ಇ-ಸ್ವತ್ತು/ ಇ-ಆಸ್ತಿಗಳನ್ನು ಅನಧೀಕೃತವಾಗಿ ನೀಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರ ನಿಯಮ 8 ರನ್ವಯ ಕಂದಾಯ ಭೂಮಿಯಲ್ಲಿರುವ ನಿವೇಶನ ಅಥವಾ ಮನೆಗಳಿಗೆ ದಾಖಲೆಗಳನ್ವಯ ನಮೂನೆ 11ಬಿ ವಿತರಣೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. |
| (ಇ) | ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕೃಷಿ ಭೂಮಿಯನ್ನು ಜಿಪಿಎ ಕರಾರು ಪತ್ರದ ಮೂಲಕ ಅನಧೀಕೃತವಾಗಿ ನಿವೇಶನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅನಧೀಕೃತವಾಗಿ ನಿವೇಶನ ನೀಡಿರುವ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಬಂದಿಲ್ಲ. |

ಸಂಖ್ಯೆ: ಗ್ರಾಅಪ 1039 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.